# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2014-15ನೇ ಸಾಲಿಗೆ ರಾಜ್ಯದಲ್ಲಿ ಹಾಲಿಯಿರುವ ಕೆಲವು ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2ನೇ ಪಾಳಿಯ ಪಾಲಿಟೆಕ್ನಿಕ್ ಅನ್ನು ಪ್ರಾರಂಭಿಸುವ ಬಗ್ಗೆ ಹಾಗೂ ಹೊಸದೊಂದು ಖಾಸಗಿ ಪಾಲಿಟೆಕ್ನಿಕ್ ಅನ್ನು ಪ್ರಾರಂಭಿಸಲು ಎಐಸಿಟಿಇ ಯು ಮಾನ್ಯತೆ ನೀಡಿರುವ ಹಿನ್ನೆಲೆಯಲ್ಲಿ ಸರ್ಕಾರದ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

ನಿರ್ದೇಶಕರು. ತಾಂತ್ರಿಕ ಶಿಕ್ಷಣ ಇಲಾಖೆ. ಬೆಂಗಳೂರು ರವರ ಪತ್ರ ಸಂಖ್ಯೆ: ಡಿಟಿಇ 14 ಡಿವಿಪಿ (2) 2014. ದಿನಾಂಕ: 27-06-2014.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು. ತಾಂತ್ರಿಕ ಶಿಕ್ಷಣ ಇಲಾಖೆ. ಬೆಂಗಳೂರು ಇವರು ರಾಜ್ಯದಲ್ಲಿ ಹಾಲಿಯಿರುವ ಕೆಲವು ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2014-15ನೇ ಶೈಕ್ಷಣಿಕ ಸಾಲಿಗೆ 2ನೇ ಪಾಳಿಯ ಪಾಲಿಟೆಕ್ನಿಕ್ ಅನ್ನು ಪ್ರಾರಂಭಿಸಲು ಹಾಗೂ ಹೊಸದಾಗಿ ಒಂದು ಖಾಸಗಿ ಪಾಲಿಟೆಕ್ನಿಕ್ ಅನ್ನು ಕೆಲವೊಂದು ಕೋರ್ಸುಗಳು ಹಾಗೂ ವಿದ್ಯಾರ್ಥಿಪ್ರಮಾಣದೊಂದಿಗೆ ಪ್ರಾರಂಭಿಸಲು ಎಐಸಿಟಿಇ ಯು ಮಾನ್ಯತೆ ನೀಡಿರುವ ಹಿನ್ನೆಲೆಯಲ್ಲಿ ಸದರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2014-15ನೇ ಶೈಕ್ಷಣಿಕ ಸಾಲಿನಲ್ಲಿ 2ನೇ ಪಾಳಿಯ ಪಾಲಿಟೆಕ್ನಿಕ್ ಅನ್ನು ಪ್ರಾರಂಭಿಸಲು ಹಾಗೂ ಹೊಸದೊಂದು ಖಾಸಗಿ ಪಾಲಿಟೆಕ್ನಿಕ್ ಅನ್ನು ಪ್ರಾರಂಭಿಸಲು ಸರ್ಕಾರದ ಸೂಕ್ತ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ. ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶಸಂಖ್ಯೆ: ಇಡಿ 179 ಟಿಪಿಇ 2014,**
**ಬೆಂಗಳೂರು, ದಿನಾಂಕ: 14ನೇ ಜುಲೈ 2014**

DVP(2)
22/7/14

ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು. ಅನುಬಂಧದಲ್ಲಿ ತಿಳಿಸಲಾಗಿರುವ ವಿವಿಧ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2ನೇ ಪಾಳಿಯ ಪಾಲಿಟೆಕ್ನಿಕ್ ಅನ್ನು ಅನುಬಂಧದಲ್ಲಿ ತಿಳಿಸಲಾಗಿರುವ ಕೋರ್ಸುಗಳು ಹಾಗೂ ವಿದ್ಯಾರ್ಥಿಪ್ರಮಾಣದೊಂದಿಗೆ ಪ್ರಾರಂಭಿಸಲು ಹಾಗೂ ಎಸ್‌ಜೆವಿಪಿ ವಿದ್ಯಾಪೀಠದ ವತಿಯಿಂದ ಎಸ್‌ಜೆವಿಪಿ ಖಾಸಗಿ ಪಾಲಿಟೆಕ್ನಿಕ್. ಹರಿಹರ. ದಾವಣಗೆರೆ ಜಿಲ್ಲೆ. ಇಲ್ಲಿ ಖಾಸಗಿ ಪಾಲಿಟೆಕ್ನಿಕ್ ಅನ್ನು ಅನುಬಂಧದಲ್ಲಿ ತಿಳಿಸಲಾಗಿರುವ ಕೋರ್ಸುಗಳು ಹಾಗೂ ವಿದ್ಯಾರ್ಥಿಪ್ರಮಾಣದೊಂದಿಗೆ 2014-15ನೇ ಶೈಕ್ಷಣಿಕ ಸಾಲಿಗೆ ಪ್ರಾರಂಭಿಸಲು ಸರ್ಕಾರವು ಈ ಕೆಳಕಂಡ ಷರತ್ತುಗಳೊಂದಿಗೆ ಮಂಜೂರಾತಿ ಹಾಗೂ ಅನುಮೋದನೆಯನ್ನು ನೀಡಿದೆ.

**ಷರತ್ತುಗಳು:**

1) ಪಾಲಿಟೆಕ್ನಿಕ್‌ಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಪಾಲಿಟೆಕ್ನಿಕ್‌ನ ಮೇಲ್ಕಂಡ ಕೋರ್ಸುಗಳಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
2) ಮೇಲ್ಕಂಡ ಪಾಲಿಟೆಕ್ನಿಕ್. ತಾಂತ್ರಿಕ ಶಿಕ್ಷಣ ಇಲಾಖೆ / ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆ / ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
5) ಎಐಸಿಟಿಇ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

.............

6) ತಾಂತ್ರಿಕ ಶಿಕ್ಷಣ ಇಲಾಖೆಯು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು ತಾಂತ್ರಿಕ ಶಿಕ್ಷಣ ಇಲಾಖೆಯು ನಿಗದಿಪಡಿಸಿದ ಶುಲ್ಕ / ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

7) ದಿನಾಂಕ: 13-8-1997ರಂದು ವಿಶಾಖ v/s ರಾಜಸ್ಥಾನ ಸರ್ಕಾರ ಮೊಕದ್ದಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ಬೋಧಕ / ಬೋಧಕೇತರ / ವ್ಯಕ್ತಿ / ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೆಯ ಅಪರಾಧ (Cognizable Offence) ಎಂದು ಪರಿಗಣಿಸಿ. ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ಬೋಧಕ / ಬೋಧಕೇತರ / ವ್ಯಕ್ತಿ / ವಿದ್ಯಾರ್ಥಿಯ ಪ್ರವೇಶವನ್ನು ರದ್ದುಪಡಿಸುವುದು: ಮತ್ತು ಸಂಬಂಧಪಟ್ಟ ಬೋಧಕ / ಬೋಧಕೇತರ / ವ್ಯಕ್ತಿ / ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು: ಮುಂದುವರೆದು. ಪಾಲಿಟೆಕ್ನಿಕ್ / ಆಡಳಿತ ಮಂಡಳಿಯು ಸುಪ್ರೀಂಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು:

8) ಪಾಲಿಟೆಕ್ನಿಕ್ ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು: ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು / ಆಡಳಿತ ಮಂಡಳಿಯು ವಿದ್ಯಾರ್ಥಿ / ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.

9) ಪಾಲಿಟೆಕ್ನಿಕ್‌ನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ತಾಂತ್ರಿಕ ಶಿಕ್ಷಣ ಇಲಾಖೆ / ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ. ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ.

10) ಪಾಲಿಟೆಕ್ನಿಕ್‌ನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ. ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ: ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ / ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.

11) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.

12) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

14/7/14

(ಬಿ.ನಾಗಭೂಷಣ್).
ಸರ್ಕಾರದ ಅಧೀನಕಾರ್ಯದರ್ಶಿ.
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

**ಗೆ,**

01. ನಿರ್ದೇಶಕರು. ತಾಂತ್ರಿಕ ಶಿಕ್ಷಣ ಇಲಾಖೆ. ಅರಮನೆ ರಸ್ತೆ, ಬೆಂಗಳೂರು.
02. ಕಾರ್ಯದರ್ಶಿಗಳು. ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು.
03. ನಿರ್ದೇಶಕರು, ಎಐಸಿಟಿಇ. ಎಸ್.ಡಬ್ಲ್ಯೂ.ಆರ್.ಓ. ಪ್ರಸನ್ನ ಕುಮಾರ್ ಬ್ಲಾಕ್, ಬೆಂಗಳೂರು. ವಿಶ್ವವಿದ್ಯಾನಿಲಯ ಆವರಣ, ಅರಮನೆ ರಸ್ತೆ, ಬೆಂಗಳೂರು-560 001.
04. ಸಂಬಂಧಿಸಿದ ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ನಿರ್ದೇಶಕರು ತಾಂತ್ರಿಕ ಶಿಕ್ಷಣ ಇಲಾಖೆ. ಬೆಂಗಳೂರು-ಇವರ ಮುಖಾಂತರ.
05. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ.

15/7/14

ಸರ್ಕಾರದ ಆದೇಶ ಸಂಖ್ಯೆ: ಇಡಿ 179 ಟಿಪಿಇ 2014,
ಬೆಂಗಳೂರು, ದಿನಾಂಕ: 14ನೇ ಜುಲೈ 2014.

## ಅನುಬಂಧ

2014-15ನೇ ಸಾಲಿಗೆ ರಾಜ್ಯದಲ್ಲಿ ಹಾಲಿಯಿರುವ ಕೆಲವು ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2ನೇ ಪಾಳಿಯ ಪಾಲಿಟೆಕ್ನಿಕ್ ಅನ್ನು ಪ್ರಾರಂಭಿಸುತ್ತಿರುವ ವಿವರಗಳು (ಕೋರ್ಸುಗಳು ಹಾಗೂ ವಿದ್ಯಾರ್ಥಿಪ್ರಮಾಣಗಳೊಂದಿಗೆ).

| ಕ್ರ. ಸಂ. | ಪಾಲಿಟೆಕ್ನಿಕ್‌ನ ಹೆಸರು | ಮಂಜೂರಾದ ಪಾಲಿಟೆಕ್ನಿಕ್ ಕೋರ್ಸ್‌ಗಳ ವಿವರ | 2014-15ನೇ ಸಾಲಿಗೆ ಎಐಸಿಟಿಇಯು ಮಂಜೂರು ಮಾಡಿರುವ ಪ್ರವೇಶ ಸಂಖ್ಯೆ |
|---|---|---|---|
| 1 | ಏಕಲವ್ಯ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಉಮ್ಮತ್ತೂರು, ಚಾಮರಾಜನಗರ - 571 316 | 1) ಮೆಕ್ಯಾನಿಕಲ್ ಇಂಜಿನಿಯರಿಂಗ್ | 60 |
| | | 2) ಸಿವಿಲ್ ಇಂಜಿನಿಯರಿಂಗ್ | 60 |
| | | **ಒಟ್ಟು** | **120** |
| 2 | ಪಿ.ಎನ್.ಎಸ್. ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ನೆಲಮಂಗಲ, ಬೆಂಗಳೂರು-562 123. | 1) ಮೆಕ್ಯಾನಿಕಲ್ ಇಂಜಿನಿಯರಿಂಗ್ | 60 |
| | | 2) ಸಿವಿಲ್ ಇಂಜಿನಿಯರಿಂಗ್ | 60 |
| | | **ಒಟ್ಟು** | **120** |
| 3 | ಹೆಚ್.ಎಮ್.ಎಸ್. ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಕ್ಯಾತಸಂದ್ರ, ತುಮಕೂರು-572 104. | 1) ಮೆಕ್ಯಾನಿಕಲ್ ಇಂಜಿನಿಯರಿಂಗ್ | 60 |
| | | 2) ಸಿವಿಲ್ ಇಂಜಿನಿಯರಿಂಗ್ | 60 |
| | | **ಒಟ್ಟು** | **120** |
| 4 | ಅಮೃತ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್ & ಮ್ಯಾನೇಜ್‌ಮೆಂಟ್ ಸೈನ್ಸ್, ಬಿಡದಿ ಇಂಡಸ್ಟ್ರಿಯಲ್ ಏರಿಯಾ, ಬಿಡದಿ, ಬೆಂಗಳೂರು-562 109. | 1) ಮೆಕ್ಯಾನಿಕಲ್ ಇಂಜಿನಿಯರಿಂಗ್ | 60 |
| | | 2) ಸಿವಿಲ್ ಇಂಜಿನಿಯರಿಂಗ್ | 60 |
| | | **ಒಟ್ಟು** | **120** |
| 5 | ಶ್ರೀ.ರೇವಣಸಿದ್ದೇಶ್ವರ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಚೊಕ್ಕನಹಳ್ಳಿ, ಚಿಕ್ಕಜಾಲ, ಬೆಂಗಳೂರು-562 157. | 1) ಮೆಕ್ಯಾನಿಕಲ್ ಇಂಜಿನಿಯರಿಂಗ್ | 60 |
| | | 2) ಇ & ಸಿ ಇಂಜಿನಿಯರಿಂಗ್ | 60 |
| | | **ಒಟ್ಟು** | **120** |
| 6 | ಬೇರೀಸ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಮಂಗಳೂರು ವಿಶ್ವವಿದ್ಯಾನಿಲಯದ ಹತ್ತಿರ, ಮಂಗಳೂರು-574 153. | 1) ಮೆಕ್ಯಾನಿಕಲ್ ಇಂಜಿನಿಯರಿಂಗ್ | 60 |
| | | 2) ಸಿವಿಲ್ ಇಂಜಿನಿಯರಿಂಗ್ | 60 |
| | | **ಒಟ್ಟು** | **120** |

2014-15ನೇ ಸಾಲಿಗೆ ಹೊಸ ಖಾಸಗಿ ಪಾಲಿಟೆಕ್ನಿಕ್(ಕೋರ್ಸುಗಳು ಹಾಗೂ ವಿದ್ಯಾರ್ಥಿಪ್ರಮಾಣಗಳೊಂದಿಗೆ).

| | | | |
|---|---|---|---|
| 7 | ಎಸ್‌ಜೆವಿಪಿ ವಿದ್ಯಾಪೀಠದ ಎಸ್‌ಜೆವಿಪಿ ಪಾಲಿಟೆಕ್ನಿಕ್, ಪಿ.ಬಿ.ರಸ್ತೆ, ಹರಿಹರ-577 601, ದಾವಣಗೆರೆ ಜಿಲ್ಲೆ. | 1) ಮೆಕ್ಯಾನಿಕಲ್ ಇಂಜಿನಿಯರಿಂಗ್ | 60 |
| | | 2) ಸಿವಿಲ್ ಇಂಜಿನಿಯರಿಂಗ್ | 60 |
| | | 3) ಎಲೆಕ್ಟ್ರಿಕಲ್ & ಎಲೆಕ್ಟ್ರಾನಿಕ್ಸ್ ಇಂಜಿ. | 60 |
| | | 4) ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಷನ್ | 60 |
| | | **ಒಟ್ಟು** | **240** |

14/7/14

(ಬಿ.ನಾಗಭೂಷಣ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

ಹಿಂಬರಹ ಸಂಖ್ಯೆ: ಡಿಟಿಇ 21 ಡಿವಿಪಿ(2) 2013 /1346 ದಿನಾಂಕ: 22/07/2014.

ಸರ್ಕಾರಿ ಆದೇಶದ ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಈ ಕೆಳಕಂಡ ಅಧಿಕಾರಿಗಳಿಗೆ ಹಾಗೂ ವಿಭಾಗಗಳಿಗೆ ಕಳುಹಿಸಲಾಗಿದೆ.

01. ಸಂಬಂಧಪಟ್ಟ ಇಂಜಿನಿಯರಿಂಗ್ ಕಾಲೇಜುಗಳ ಎರಡನೇ ಪಾಳಿಯ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ.
02. ಅಧ್ಯಕ್ಷರು / ಕಾರ್ಯದರ್ಶಿ, ಶ್ರೀ ಜಗದ್ಗುರು ಪಂಚಚಾರ್ಯ ವಿಶ್ವಧರ್ಮ ವಿದ್ಯಾಪೀಠ, ಪಿ.ಬಿ.ರೋಡ್, ಹರಿಹರ-577601, ದಾವಣಗೆರೆ ಜಿಲ್ಲೆ.
03. ಪ್ರಿನ್ಸಿಪಾಲರು, ಎಸ್.ಜೆ.ವಿ.ಪಿ. ಪಾಲಿಟೆಕ್ನಿಕ್, ವಾಗೀಶ್‌ನಗರ, ಹಳೇ ಪಿ.ಬಿ.ರೋಡ್, ಹರಿಹರ-577601, ದಾವಣಗೆರೆ ಜಿಲ್ಲೆ.
04. ಸಹ ನಿರ್ದೇಶಕರು [ಆಡಳಿತ/ಪರೀಕ್ಷೆ/ತನಿಖೆ/ಸಿಡಿಸಿ/ಎಟಿಎಸ್]
05. ಉಪ ನಿರ್ದೇಶಕರು [ಯೋಜನೆ/ಪರೀಕ್ಷೆ/ಸಿಡಿಸಿ]
06. ಸಹಾಯಕ ನಿರ್ದೇಶಕರು [ಯೋಜನೆ/ಪರೀಕ್ಷೆ/ಎಂಪಿಸಿ]
07. ಸಂಖ್ಯಾಧಿಕಾರಿಗಳಿಗೆ
08. ರಿಜಿಸ್ಟ್ರಾರ್ - ಪರೀಕ್ಷೆ/ಎಸಿಎಂ
09. ಅಧೀಕ್ಷಕರು, ಪರೀಕ್ಷೆ/ಎಸಿಎಂ
10. ಪರೀಕ್ಷಾ ವಿಭಾಗದ ಆರ್‌ಡಿಎಂ ಮತ್ತು ಇಎಫ್‌ಎಸ್ ವಿಭಾಗಕ್ಕೆ
11. ಎಸಿಎಂ(2) ವಿಭಾಗಕ್ಕೆ
12. ಸರ್ಕಾರಿ ಆದೇಶಗಳ ಕಡತಕ್ಕೆ
13. ನಿರ್ದೇಶಕರ ಆಪ್ತಶಾಖೆಗೆ
14. ಕಛೇರಿ ಪ್ರತಿ.
15. ಪ್ರತಿಯನ್ನು ಸಂಬಂಧಪಟ್ಟ ಕಡತಕ್ಕೆ (ಸಂಖ್ಯೆ: ಡಿಟಿಇ 14 ಡಿವಿಪಿ(2) 2014)
16. ನಿರ್ದೇಶನಾಲಯದ ಇ-ಗೌವರ್‌ನೆನ್ಸ್ ಸೆಲ್‌ಗೆ

ಜಂಟಿ ನಿರ್ದೇಶಕರು (ಎಟಿಎಸ್)

22/7/2014